ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015–16 ದಿನಾಂಕ: 21–10–2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ರಾಷ್ಟ್ರೀಯ ವಿಚಾರ ಸಂಕಿರಣ :<br>ಭಾರತದಲ್ಲಿ ಭಾಷಾ ಪತ್ರಿಕೋದ್ಯಮದ ಭವಿಷ್ಯ ಮತ್ತು ಸವಾಲುಗಳು.<br>ಮುಖ್ಯ ಅತಿಥಿ:<br>ಆರ್. ರೋಷನ್ ಬೇಗ್,<br>ಮೂಲಸೌಕರ್ಯ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಹಾಗೂ ಹಜ್ ಖಾತೆ ಸಚಿವರು.<br>ಎಚ್. ಎಂ. ರೇವಣ್ಣ,<br>ಶಾಸಕರು ಹಾಗೂ ಮಾಜಿ ಸಚಿವರು.<br>ರವಿ ಹೆಗಡೆ<br>ಸಮೂಹ ಸಂಪಾದಕರು,<br>ಉದಯವಾಣಿ,<br>ಬೆಂಗಳೂರು.<br>ಡಾ. ಬಿ. ಕೆ. ರವಿ,<br>ವಿಭಾಗ ಮುಖ್ಯಸ್ಥರು, | **26-10-2015**<br>ಸೋಮವಾರ<br>ಮಧ್ಯಾಹ್ನ<br>2–45 ಗಂಟೆಗೆ | ವಿಜಯ್ ರೆಸಿಡೆನ್ಸಿ ವೈಸ್‌ರಾಯ್ ಹಾಲ್, ಸಪ್ನ ಬುಕ್ ಹೌಸ್ ಎದುರು, 3ನೇಮುಖ್ಯ ರಸ್ತೆ, ಗಾಂಧಿನಗರ, ಬೆಂಗಳೂರು – 560 009 |

| | | | |
|---|---|---|---|
| | ಸಮೂಹ ಸಂಪರ್ಕ ವಿಭಾಗ,<br><br>ಬೆಂಗಳೂರು ವಿಶ್ವವಿದ್ಯಾನಿಲಯ, | | |

ನಿರ್ದೇಶಕರ ಪರವಾಗಿ

## <u>ಪತ್ರಿಕಾ ಪ್ರಕಟಣೆ</u>

## <u>ಪರಿಹಾರ ಹಣ ಹುತಾತ್ಮರ ಪ್ರಾಣತ್ಯಾಗಕ್ಕೆ ಸಮವಲ್ಲ: ಮುಖ್ಯಮಂತ್ರಿ ಸಿದ್ದರಾಮಯ್ಯ</u>

ಬೆಂಗಳೂರು, ಅಕ್ಟೋಬರ್ 21 (ಕರ್ನಾಟಕ ವಾರ್ತೆ)

ರಾಜ್ಯ ಸರ್ಕಾರ ಕರ್ತವ್ಯನಿರತರಾಗಿ ಸಾವನಪ್ಪಿದ ಪೋಲೀಸರ ಕುಟುಂಬಗಳಿಗೆ ನೀಡುವ ಪರಿಹಾರ ಮೊತ್ತವನ್ನು 50 ಲಕ್ಷಗಳಿಗೆ ಹೆಚ್ಚಿಸಿದೆ. ಈ ಹಣ ಅವರ ತ್ಯಾಗಕ್ಕೆ ಪರಿಹಾರವಲ್ಲ, ಆದರೆ, ಹುತಾತ್ಮರ ಕುಟುಂಬ ನಿರ್ವಹಣೆ ಹಾಗೂ ಅವರ ಮಕ್ಕಳ ಶಿಕ್ಷಣಕ್ಕಾಗಿ ಪರಿಹಾಉದ ಹಣ ನೆರವಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಇಂದು ನಗರದ ಸಶಸ್ತ್ರ ಮೀಸಲು ಪಡೆ, ಕೇಂದ್ರ ಸ್ಥಾನದ ಹುತಾತ್ಮರ ಉದ್ಯಾನವನದಲ್ಲಿ ನಡೆದ ಪೋಲೀಸ್ ಸಂಸ್ಮರಣಾ ದಿನಾಚರಣೆ ಕಾರ್ಯಕ್ರಮದಲ್ಲಿ ಹುತಾತ್ಮರ ಸ್ಮಾರಕಕ್ಕೆ ಪುಷ್ಪಚಕ್ರ ಸಮರ್ಪಿಸಿ ಗೌರವ ಶ್ರದ್ಧಾಂಜಲಿ ಸಲ್ಲಿಸಿ ಮಾತನಾಡಿದರು.

ಕರ್ನಾಟಕದ ಒಟ್ಟು 11 ಅಧಿಕಾರಿ/ಸಿಬ್ಬಂದಿ ಸೇರಿದಂತೆ ದೇಶದಾದ್ಯಂತ ಕಳೆದ ಒಂದು ವರ್ಷದಲ್ಲಿ 434 ಪೋಲೀಸ್ ಅಧಿಕಾರಿ/ಸಿಬ್ಬಂದಿ ಕರ್ತವ್ಯ ನಿರ್ವಹಣೆ ಸಂದರ್ಭದಲ್ಲಿ ಹುತಾತ್ಮರಾಗಿದ್ದಾರೆ. ಸಮಾಜದ ಸ್ವಾಸ್ಥ್ಯಕ್ಕಾಗಿ ಶಾಂತಿ–ಸುವ್ಯವಸ್ಥೆ ಕಾಪಾಡಲು ತಮ್ಮ ಪ್ರಾಣತೆತ್ತಿದ್ದಾರೆ ಎಂದ ಮುಖ್ಯಮಂತ್ರಿಗಳು, ರಾಜ್ಯದ ಸಮಸ್ತ ಜನತೆ ಪರವಾಗಿ ಹಾಗೂ ವಯಕ್ತಿಕವಾಗಿ ಹುತಾತ್ಮರೆಲ್ಲರಿಗೂ ಶ್ರದ್ಧಾಂಜಲಿ ಅರ್ಪಿಸಿದರು.

ಕಾರ್ಯಕ್ರಮದಲ್ಲಿ ಇತ್ತೀಚಿಗೆ ಬೈಕ್ ಕಳ್ಳತನ ಆರೋಪಿಗಳನ್ನು ಬಂಧಿಸುವ ಕಾರ್ಯಾಚರಣೆ ವೇಳೆ ದೊಡ್ಡಬಳ್ಳಾಪುರ ನಗರ ಠಾಣೆಯ ಪೋಲೀಸ್ ಸಬ್ ಇನ್ಸ್‌ಪೆಕ್ಟರ್ ಜಗದೀಶ್ ಅವರು ಆರೋಪಿಗಳಿಂದ ಹತರಾಗಿದ್ದು, ಅವರ ಪತ್ನಿ ರಮ್ಯ ಹಾಗೂ ಪೋಷಕರಿಗೆ ರೂ. 30ಲಕ್ಷಗಳ ಚೆಕ್‌ನ್ನು ನೀಡಿ ಸಾಂತ್ವನ ಹೇಳಿದರು.

ಹೊರ ಜಿಲ್ಲೆಗಳಿಂದ ರಾಜಧಾನಿಗೆ ವಿವಿಧ ಕರ್ತವ್ಯದ ಮೇಲೆ ಬರುವ ಪೋಲೀಸ್ ಸಿಬ್ಬಂದಿಗೆ ಉಳಿದುಕೊಳ್ಳಲು ಅನುಕೂಲವಾಗುವಂತೆ ನಗರದ ಆನಂದರಾವ್ ವೃತ್ತದ ಬಳಿ ವಿಶ್ರಾಂತಿ ಗೃಹ ನಿರ್ಮಿಸಲು ಸರ್ಕಾರ ರೂ.5.00 ಕೋಟಿ ನೀಡಲಿದೆ ಎಂದು ಮುಖ್ಯಮಂತ್ರಿಗಳು ಇದೇ ಸಂದರ್ಭದಲ್ಲಿ ಹೇಳಿದರು.

ಶೋಕವಾದ್ಯದೊಂದಿಗೆ ಡೆತ್ ಮಾರ್ಚ್‌ನಿಂದ ಪ್ರಾರಂಭಗೊಂಡ ಕಾರ್ಯಕ್ರಮದಲ್ಲಿ ಹುತಾತ್ಮರ ಗೌರವಾರ್ಥ ಮೂರು ಸುತ್ತು ಗಾಳಿಯಲ್ಲಿ ಗುಂಡನ್ನು ಹಾರಿಸಿ ರಾಷ್ಟ್ರಗೀತೆಯೊಂದಿಗೆ ನಮನ ಸಲ್ಲಿಸಲಾಯಿತು. ಗೃಹ

ಸಚಿವ ಕೆ ಜೆ ಜಾರ್ಜ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಕೌಶಿಕ್ ಮುಖರ್ಜಿ ಸೇರಿದಂತೆ ಇತರೆ ಹಿರಿಯ ಹಾಗೂ ಕಿರಿಯ ಪೊಲೀಸ್ ಅಧಿಕಾರಿಗಳು ಹುತಾತ್ಮರ ಸ್ಮಾರಕಕ್ಕೆ ಪುಷ್ಪಚಕ್ರ ಅರ್ಪಿಸಿ ಗೌರವ ಸಲ್ಲಿಸಿದರು.

ಪಲ್ಲವಿ

## ಮೈಸೂರು ಹಾಗೂ ಬೆಳಗಾವಿಯಲ್ಲಿ ಸಾಹಿತ್ಯ ಕಮ್ಮಟಗಳು

ಬೆಂಗಳೂರು, ಅಕ್ಟೋಬರ್ 21 (ಕರ್ನಾಟಕ ವಾರ್ತೆ)

ಕರ್ನಾಟಕ ಸಾಹಿತ್ಯ ಅಕಾಡೆಮಿಯು ನವೆಂಬರ್ 25 ರಿಂದ 27 ರವರೆಗೆ ಮೈಸೂರಿನಲ್ಲಿ " ಸಂಶೋಧನಾ ಕಮ್ಮಟ " ಹಾಗೂ ಡಿಸೆಂಬರ್ 3 ರಿಂದ 5 ರವರೆಗೆ ಬೆಳಗಾವಿ ಜಿಲ್ಲೆಯ ರಾಯಭಾಗದಲ್ಲಿ "ಮಹಿಳಾ ಸಾಹಿತ್ಯ ಕಮ್ಮಟ"ವನ್ನು ಹಮ್ಮಿಕೊಳ್ಳಲಿದೆ.

ಆಸಕ್ತರು ಅರ್ಜಿ ನಮೂನೆಯನ್ನು ಹಾಗೂ ಕಮ್ಮಟದ ಉಳಿದ ವಿವರಗಳನ್ನು ಕರ್ನಾಟಕ ಸಾಹಿತ್ಯ ಅಕಾಡೆಮಿಯ ವೆಬ್‌ಸೈಟ್ http://karnatakasahithyaacademy.org ನಲ್ಲಿ ಪಡೆಯಬಹುದಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ 10-11-2015.

ಅರ್ಜಿಗಳನ್ನು ಕನ್ನಡ ಭವನ, 2ನೇ ಮಹಡಿ, ಜೆ.ಸಿ. ರಸೆ, ಬೆಂಗಳೂರು – 560 002 ಇಲ್ಲಿಗೆ ದಿನಾಂಕ 10-11-2015 ರೊಳಗೆ ಸಲ್ಲಿಸಲು ಸೂಚಿಸಿದೆ.

ಪಲ್ಲವಿ:ಜಿಪಿಆರ್.

## ಅನುದಾನರಹಿತ ಹೊಸ ಶಾಲೆ ಪ್ರಾರಂಭಿಸಲು ಆನ್‌ಲೈನ್ ಅರ್ಜಿ

ಬೆಂಗಳೂರು, ಅಕ್ಟೋಬರ್ 21 (ಕರ್ನಾಟಕ ವಾರ್ತೆ)

ಹೊಸದಾಗಿ 2016-17 ನೇ ಸಾಲಿನಲ್ಲಿ ಅನುದಾನ ರಹಿತ ಪೂರ್ವ ಪ್ರಾಥಮಿಕ, ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳನ್ನು ತೆರೆಯಲು ಉದ್ದೇಶಿಸಿರುವ ಅರ್ಹ ನೋಂದಾಯಿತ ಸಂಸ್ಥೆಗಳು ಆನ್-ಲೈನ್ ( ONLINE) ಮೂಲಕ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಈ ತಂತ್ರಾಂಶವು ಸಾರ್ವಜನಿಕ ಶಿಕ್ಷಣ ಇಲಾಖೆಯ ವೆಬ್‌ಸೈಟ್ schooleducation.kar.nic.in ನಲ್ಲಿ ದಿನಾಂಕ 02-11-2015 ರಿಂದ ದಿನಾಂಕ 15-11-2015 ರ ತನಕ ಲಭ್ಯವಿರುತ್ತದೆ. ಅನ್-ಲೈನ್‌ನಲ್ಲಿ ಭರ್ತಿಮಾಡಿ ಸಲ್ಲಿಸಿದ ಅರ್ಜಿಯ ಪ್ರತಿಯನ್ನು ಪ್ರಿಂಟ್ ತೆಗೆದು ಅಗತ್ಯ ದಾಖಲೆಗಳೊಂದಿಗೆ ದಿನಾಂಕ: 20-11-

2015 ರೊಳಗೆ ಆಯಾ ಕ್ಷೇತ್ರ ಶಿಕ್ಷಣದಿಕಾರಿಗಳ ಕಚೇರಿಗೆ ಸಲ್ಲಿಸಿ ಅರ್ಜಿಯ ಸ್ಥಿತಿಯನ್ನು ಆನ್-ಲೈನ್ ತಂತ್ರಾಂಶದ ವೀಕ್ಷಿಸಬಹುದಾಗಿದೆ ಎಂದು ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪಲ್ಲವಿ:ಜಿಪಿಆರ್.

# ದ್ವಿತೀಯ ಅಧಿವೇಶನದ ಇಲಾಖಾ ಪರೀಕ್ಷೆಗಳು

ಬೆಂಗಳೂರು, ಅಕ್ಟೋಬರ್ 21 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು 2015ನೇ ಸಾಲಿನ ದ್ವಿತೀಯ ಅಧಿವೇಶನದ ಇಲಾಖಾ ಪರೀಕ್ಷೆಗಳನ್ನು ವಿವಿಧ ಪರೀಕ್ಷಾ ಕೇಂದ್ರಗಳಲ್ಲಿ ನಡೆಸಲಿದೆ.

ದಿನಾಂಕ 28-10-2015 ರಿಂದ 30-10-2015 ರವರೆಗೆ ರಾಜ್ಯದ ಎಲ್ಲಾ ಕೇಂದ್ರಗಳು ಮತ್ತು ನವದೆಹಲಿ ಕೇಂದ್ರದಲ್ಲಿ, ದಿನಾಂಕ: 31-10-2015 ರಿಂದ 09-11-2015 ರವರೆಗೆ ಬೆಂಗಳೂರು, ಬೆಳಗಾವಿ, ವಿಜಯಪುರ, ಗದಗ, ಕಲಬುರಗಿ, ಮಂಗಳೂರು, ಮೈಸೂರು, ರಾಯಚೂರು, ಶಿವಮೊಗ್ಗ ಕೇಂದ್ರಗಳು ಹಾಗೂ ನವದೆಹಲಿ ಕೇಂದ್ರದಲ್ಲಿ ಹಾಗೂ ದಿನಾಂಕ 16-11-2015 ರಿಂದ 21-11-2015 ರವರೆಗೆ ಬೆಂಗಳೂರು ಕೇಂದ್ರದಲ್ಲಿ ಪರೀಕ್ಷೆಗಳು ನಡೆಯಲಿದೆ.

ಈ ಪರೀಕ್ಷೆಗಳಿಗೆ ಈಗಾಗಲೇ ಅರ್ಜಿ ಸಲ್ಲಿಸಿರುವ ಅರ್ಹ ಅಭ್ಯರ್ಥಿಗಳ ಪ್ರವೇಶ ಪತ್ರಗಳನ್ನು ಮತ್ತು ಅನರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಆಯೋಗದ ವೆಬ್‌ಸೈಟ್‌ನಲ್ಲಿ ಅಳವಡಿಸಲಾಗಿರುತ್ತದೆ. ಅಭ್ಯರ್ಥಿಗಳು ದಿನಾಂಕ 19-10-2015 ರಿಂದ ಆಯೋಗದ ವೆಬ್‌ಸೈಟ್ http://kpsc.kar.nic.in ನ **Home Page** ನಲ್ಲಿ **CLICK HERE TO DOWNLOAD ADMISSION TICKET FOR DEPARTMENTAL EXAMINATION 2015 II** ಎನ್ನುವ **LINK** ಅನ್ನು ಕ್ಲಿಕ್ ಮಾಡಿ ತಮ್ಮ ಅರ್ಜಿ ಸಂಖ್ಯೆಯನ್ನು ನಮೂದಿಸಿ ಪ್ರವೇಶ ಪತ್ರಗಳನ್ನು ಹಾಗೂ ಸೂಚನೆಗಳ ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಳ್ಳಲು ಆಯೋಗ ತಿಳಿಸಿದೆ.

ಪಲ್ಲವಿ:ಜಿಪಿಆರ್.

# ಅಕ್ಟೋಬರ್ 23 ರಂದು ಬಾಲ ಭವನಕ್ಕೆ ರಜೆ

ಬೆಂಗಳೂರು, ಅಕ್ಟೋಬರ್ 21 (ಕರ್ನಾಟಕ ವಾರ್ತೆ)

ವಿಜಯದಶಮಿ ಪ್ರಯುಕ್ತ ಅಕ್ಟೋಬರ್ 23 ರಂದು ಬಾಲ ಭವನಕ್ಕೆ ರಜೆ ಘೋಷಿಸಲಾಗಿದೆ. ಅಂದು ಬಾಲ ಭವನದಲ್ಲಿ ಯಾವುದೇ ಕಾರ್ಯಕ್ರಮಗಳು ಇರುವುದಿಲ್ಲ. ಬಾಲ ಭವನ ಸೊಸೈಟಿ ಪ್ರಕಟಣೆ ತಿಳಿಸಿದೆ.

ಪಲ್ಲವಿ/ಕೆಎಂ

# <u>ಕಬ್ಬನ್‌ಪಾರ್ಕ್ ನಲ್ಲಿ ಈ ಭಾನುವಾರ</u>

**ಬೆಂಗಳೂರು, ಅಕ್ಟೋಬರ್ 21 (ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. ದಿನಾಂಕ:25-10-2015ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1. ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "**ಉದ್ಯಾನವನದಲ್ಲಿ ಉದಯರಾಗ**" ಎಂಬ ಶೀರ್ಷಿಕೆಯಡಿ ಶ್ರೀ ವಿ. ಶಿವವೆಂಕಟಯ್ಯ ಹಾಗೂ ಸಂಗಡಿಗರು, ರಾಮನಗರರವರಿಂದ ಜಾನಪದ ಗಾಯನ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
2. ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "**ಉದ್ಯಾನವನದಲ್ಲಿ ಸಂಧ್ಯಾರಾಗ**" ಎಂಬ ಶೀರ್ಷಿಕೆಯಡಿ ಶ್ರೀ ವೆಂಕಟರಮಣಪ್ಪ ಹಾಗೂ ಸಂಗಡಿಗರು, ಗೌರಿಬಿದನೂರುರವರಿಂದ ಸುಗಮಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
3. ಬೆಳಿಗ್ಗೆ 6.00 ಗಂಟೆಯಿಂದ ಸಂಜೆ 6.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
4. ಉದ್ಯಾನವನದ ಆವರಣದಲ್ಲಿ ಜೈವಿಕ್ ಕೃಷಿಕ್ ಸೊಸೈಟಿ(ರಿ), ಲಾಲ್‌ಬಾಗ್, ಬೆಂಗಳೂರುರವರು ತಮ್ಮ ಮಾರಾಟ ಮಳಿಗೆಯಲ್ಲಿ ಸಾವಯವ ಪದ್ಧತಿಯಲ್ಲಿ ಬೆಳೆದ ವಿವಿಧ ರೀತಿಯ ಹಣ್ಣುಗಳು ಮತ್ತು ಹಣ್ಣಿನ ಜ್ಯೂಸ್ ಮತ್ತು ಇತರೆ ಸಾವಯವ ಆಹಾರ ಪದಾರ್ಥಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
5. ಉದ್ಯಾನವನದ ಆವರಣದಲ್ಲಿ ಹಾಪ್‌ಕಾಮ್ಸ್, ಬೆಂಗಳೂರುರವರು ವಿವಿಧ Cut Fruits, Dry Fruits ಮತ್ತು ವಿವಿಧ ತಾಜಾ ಹಣ್ಣುಗಳು, ಪ್ಯಾಕ್ ಮಾಡಿದ ತಾಜಾ ತರಕಾರಿಗಳು ಹಾಗೂ ಹಣ್ಣಿನ ಜ್ಯೂಸ್‌ಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
6. ಉದ್ಯಾನವನದ ಆವರಣದಲ್ಲಿ ದಿ ನರ್ಸರಿಮೆನ್ ಕೋ-ಆಪರೇಟೀವ್ ಸೊಸೈಟಿ, ಲಾಲ್‌ಬಾಗ್, ಬೆಂಗಳೂರುರವರು ವಿವಿಧ ಅಲಂಕಾರಿಕ ಗಿಡಗಳು ಮತ್ತು ಉದ್ಯಾನವನ ಸಲಕರಣೆಗಳ ಮಾರಾಟವನ್ನು ಕೈಗೊಳ್ಳುತ್ತಾರೆ.

7. ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರುರವರ ವತಿಯಿಂದ ನಗರ ಕೇಂದ್ರ ಗ್ರಂಥಾಲಯ ಮತ್ತು ಇಂದಿರಾ ಪ್ರಿಯದರ್ಶಿನಿ ಮಕ್ಕಳ ಗ್ರಂಥಾಲಯದ ಆವರಣದಲ್ಲಿ ಪುಸ್ತಕ ಪ್ರದರ್ಶನವನ್ನು ಏರ್ಪಡಿಸಲಾಗಿದೆ.

8. ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

## ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:

### I. ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ

- ಬೆಳಿಗ್ಗೆ 7.00 ಗಂಟೆಯಿಂದ ಬೆಳಿಗ್ಗೆ 8.00 ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಸಹಯೋಗದೊಂದಿಗೆ ಶ್ರೀ ಲಲಿತಕಲಾನಿಕೇತನ, ಬೆಂಗಳೂರಿನ ವಿದ್ಯಾರ್ಥಿಗಳಾದ ಕುಮಾರಿ ಮೇಘನ ಮತ್ತು ಮಾಸ್ಟರ್ ಮನುರವರಿಂದ ಭರತ ನಾಟ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 8.00 ಗಂಟೆಯಿಂದ ಬೆಳಿಗ್ಗೆ 9.00 ಗಂಟೆಯವರೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಬಾಲಭವನ ಸೊಸೈಟಿ, ಬೆಂಗಳೂರುರವರ ಸಹಯೋಗದೊಂದಿಗೆ ನೃತ್ಯಶಾಲೆ ಸಂಕರ್ಷಣ ಅಕಾಡೆಮಿರವರ ವತಿಯಿಂದ ನೃತ್ಯ ಪ್ರದರ್ಶನವನ್ನು ಏರ್ಪಡಿಸಲಾಗಿದೆ.
- ಸಂಜೆ 4.00 ಗಂಟೆಯಿಂದ 5.00 ಗಂಟೆಯವರೆಗೆ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಮತ್ತು ಅಕ್ಷಯ ಪೌಂಢೇಷನ್ ರವರ ಸಹಯೋಗದೊಂದಿಗೆ ಮಂಜುಳ ವಿ. ಬನಹಳ್ಳಿ, ಸಾಹಿತಿಗಳು, ಕನ್ನಡ ಪ್ರಾಧ್ಯಾಪಕರು, ಎಸ್.ಆರ್.ಎನ್. ಆದರ್ಶ ಸಂಜೆ ಕಾಲೇಜು, ಬೆಂಗಳೂರು ಇವರಿಂದ "ಜಿ.ಪಿ. ರಾಜರತ್ನಂರವರ ಕನ್ನಡತ್ವದ ಪರಿಕಲ್ಪನೆ" ಬಗ್ಗೆ ಉಪನ್ಯಾಸ ಕಾರ್ಯಕ್ರಮವನ್ನು ಮತ್ತು ಗುರುಚಂದ್ರಿಕ ಅವರಿಂದ ಲಘು ಶಾಸ್ತ್ರೀಯ ನೃತ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

### II. ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ

- ಬೆಳಿಗ್ಗೆ 6.00 ಗಂಟೆಯಿಂದ ಮಧ್ಯಾಹ್ನ 12.00 ಗಂಟೆಯವರೆಗೆ ವಿದ್ಯಾರಣ್ಯ ಸ್ವಯಂ ಸೇವಾ ಸಂಸ್ಥೆ, ಮಂಡೂರು, ಬೆಂಗಳೂರು-49 ರವರಿಂದ ಮೇಣದ ಬತ್ತಿ ತಯಾರಿಕೆ, ಪೇಪರ್ ಕವರ್ ಮೇಕಿಂಗ್, ತೆಂಗಿನ ಗರಿಯ ಪೊರಕೆಗಳ ಉತ್ಪಾದನೆ, ಪ್ರದರ್ಶನ ಮತ್ತು ಮಾರಾಟವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 6.00 ಗಂಟೆಯಿಂದ ಮಧ್ಯಾಹ್ನ 12.00 ಗಂಟೆಯವರೆಗೆ ಸ್ಥಳೀಯ ಆರೋಗ್ಯ ಪರಂಪರೆಗಳ ಪುನರುಜ್ಜೀವನ ಪ್ರತಿಷ್ಠಾನ, ಯಲಹಂಕ (Foundation For Revitilisation of Local Health Tradition - FRLHT) ಟ್ರಾನ್ಸ್ ಡಿಸಿಪ್ಲೀನರಿ ಯೂನಿವರ್ಸಿಟಿರವರ ವತಿಯಿಂದ ಔಷಧೀಯ ಗಿಡಗಳ ಪ್ರಾತ್ಯಕ್ಷತೆ ಮತ್ತು ಮಾರಾಟ ಮತ್ತು ಸದರಿ ಸಂಸ್ಥೆಯ ವಿವಿಧ ಪಬ್ಲಿಕೇಷನ್ ಮತ್ತು ಆಸ್ಪತ್ರೆ ಸೇವೆಗಳ ಕುರಿತು ಸಾಮಾಗ್ರಿಗಳ ಪ್ರದರ್ಶನ
- ಬೆಳಿಗ್ಗೆ 6.00 ಗಂಟೆಯಿಂದ ಮಧ್ಯಾಹ್ನ 11.00 ಗಂಟೆಯವರೆಗೆ ಸಹಾಯ ಹೋಲಿಸ್ಟಿಕ್ ಇಂಟೆಗ್ರೇಟೀವ್ ಹಾಸ್ಪಿಟಲ್ ಪ್ರೈವೇಟ್ ಲಿಮಿಟೆಡ್, ಜಯನಗರ, ಬೆಂಗಳೂರುರವರ ವತಿಯಿಂದ ಆಯುರ್ವೇದ, ನ್ಯಾಚುರೋಪತಿ, ಹೋಮಿಯೋಪತಿ ಮತ್ತು ಯೋಗ ವಿಧಾನಗಳಿಂದ ಉತ್ತಮ ಆರೋಗ್ಯ ಕಾಪಾಡಿಕೊಳ್ಳುವ ಮಾಹಿತಿ ಮತ್ತು ಜಾಗೃತಿ ಕಾರ್ಯಕ್ರಮ ಹಾಗೂ ಆರೋಗ್ಯದ ತಪಾಸಣೆ, ಸಲಹೆಗಳು ಮತ್ತು ಗಿಡಮೂಲಿಕೆಗಳ ಸಿದ್ಧ ಔಷಧದ ಬಗ್ಗೆ ಮಾಹಿತಿ ನೀಡಲಾಗುವುದು.

**III.** ಸಮಕಾಲೀನ ಕಾಷ್ಠ ಶಿಲ್ಪಕಲಾ ಶಿಬಿರವು ದಿನಾಂಕ:13-10-2015ರಿಂದ 27-10-2015ರವರೆಗೆ ಕಬ್ಬನ್ ಉದ್ಯಾನವನದಲ್ಲಿ ನಡೆಯುತ್ತಿದ್ದು, ಉದ್ಯಾನವನದ ಟೆನ್ನಿಸ್ ಕ್ರೀಡಾಂಗಣ, ಕೇಂದ್ರ ಗ್ರಂಥಾಲಯ ಮತ್ತು ಬ್ಯಾಂಡ್ ಸ್ಟ್ಯಾಂಡ್ ಬಳಿ ವೀಕ್ಷಿಸಬಹುದು.